**All India Radio: Bangalore**
**National Bulletin In Kannada**
**04.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.04.2026 1.10 p.m.**

**<><><><>**

ಮುಖ್ಯಾಂಶಗಳು

1. ಪಂಚರಾಜ್ಯ ವಿಧಾನಸಭಾ ಚುನಾವಣೆ; ವಿವಿಧ ರಾಜಕೀಯ ಮುಖಂಡರಿಂದ ಚುನಾವಣಾ ಪ್ರಚಾರ
2. ವಿದೇಶಿ ಕೊಡುಗೆ ನಿಯಂತ್ರಣ ತಿದ್ದುಪಡಿ ವಿಧೇಯಕ ಕುರಿತು ತಪ್ಪು ತಿಳುವಳಿಕೆಗಳನ್ನು ಸರ್ಕಾರ ಬಗೆಹರಿಸಲಿದೆ - ಕೇಂದ್ರ ಸಚಿವ ಕಿರಣ್ ರಿಜಿಜು
3. ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿದ ಭಾರತದ ಧ್ವಜಹೊತ್ತ ಗ್ರೀನ್ ಸಾನ್ವಿ ಎಲ್‌ಪಿಜಿ ಟ್ಯಾಂಕರ್
4. ಐಪಿಎಲ್ ಟಿ-೨೦ ಕ್ರಿಕೆಟ್; ದಿನದ ಮೊದಲ ಪಂದ್ಯದಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್ - ಮುಂಬೈ ಇಂಡಿಯನ್ಸ್ ಮುಖಾಮುಖಿ

<><><><>

ಅಸ್ಸಾಂ, ಕೇರಳ, ತಮಿಳುನಾಡು, ಪಶ್ಚಿಮಬಂಗಾಳ ಮತ್ತು ಪುದುಚೇರಿ ಸೇರಿದಂತೆ ನಾಲ್ಕು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಕೇರಳಕ್ಕೆ ಭೇಟಿ ನೀಡಲಿದ್ದು, ಚಂಗನಸ್ಸೆರಿ ಮತ್ತು ತಿರುವಲ್ಲಾದಲ್ಲಿ ಚುನಾವಣಾ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ತಿರುವನಂತಪುರಂನಲ್ಲಿ ರೋಡ್ ಶೋ ನಡೆಸಲಿದ್ದಾರೆ. ಮತ್ತೊಂದೆಡೆ ಕಾಂಗ್ರೆಸ್ ಮುಖಂಡ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಅಲಪ್ಪುಳದಲ್ಲಿ ಯುಡಿಎಫ್ ಅಭ್ಯರ್ಥಿಪರ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕುನ್ನತುನಾಡ್ ಮತ್ತು ಕಟಪ್ಪನಾದಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿಯೂ ಅವರು ಭಾಗವಹಿಸಲಿದ್ದಾರೆ. ಸಿಪಿಎಂ ಪಕ್ಷದ ಪ್ರಧಾನ ಕಾರ್ಯದರ್ಶಿ ಎಂ.ಎ. ಬೇಬಿ

ಕೊಟ್ಟಾಯಮ್‌ನಲ್ಲಿ ನಡೆಯುವ ಹಲವು ಎಲ್‌ಡಿಎಫ್ ಅಭ್ಯರ್ಥಿ ಪರ ಪ್ರಚಾರ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ಅಸ್ಸಾಂ, ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮಬಂಗಾಳದಲ್ಲಿ ವಿಧಾನಸಭಾ ಚುನಾವಣಾ ಹಿನ್ನೆಲೆಯಲ್ಲಿ ಮತದಾನದ ದಿನದಂದು ಎಲ್ಲಾ ಮತದಾರರಿಗೆ ವೇತನಸಹಿತ ರಜೆ ನೀಡುವಂತೆ ಚುನಾವಣಾ ಆಯೋಗ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗ ನಿರ್ದೇಶನ ನೀಡಿದೆ. ದಿನಗೂಲಿ ಮತ್ತು ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಎಲ್ಲಾ ಅರ್ಹಮತದಾರರಿಗೆ ವೇತನ ಕಡಿತವಿಲ್ಲದೆ, ರಜೆ ನೀಡುಬೇಕು ಎಂದು ಆಯೋಗ ಸ್ಪಷ್ಟಪಡಿಸಿದೆ.

<><><>

ಪಶ್ಚಿಮ ಬಂಗಾಳದಲ್ಲಿ ಮತದಾರರ ಅನುಕೂಲಕ್ಕಾಗಿ ೪ ಸಾವಿರದ ೬೬೦ ಹೆಚ್ಚುವರಿ ಮತಗಟ್ಟೆಗಳನ್ನು ಸ್ಥಾಪಿಸಲು ಭಾರತೀಯ ಚುನಾವಣಾ ಆಯೋಗ ಹಸಿರುನಿಶಾನೆ ತೋರಿದೆ. ಒಂದು ಮತದಾನ ಕೇಂದ್ರದಲ್ಲಿ ಮತದಾರರ ಸಂಖ್ಯೆ ಒಂದು ಸಾವಿರದ ೨೦೦ಕ್ಕಿಂತ ಹೆಚ್ಚಿರುವ ಕಡೆಗಳಲ್ಲಿ ಈ ಹೆಚ್ಚುವರಿ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಗಿದೆ. ಇದರೊಂದಿಗೆ ಮತದಾರರ ಹಿತದೃಷ್ಟಿಯಿಂದ ೩೨೯ ಮತಗಟ್ಟೆಗಳನ್ನು ಬೇರೆಡೆಗೆ ಸ್ಥಳಾಂತರಿಸಲು ಸಹ ಆಯೋಗ ಅನುಮೋದನೆ ನೀಡಿದೆ. ಈ ನಡುವೆ, ಪಶ್ಚಿಮಬಂಗಾಳದಲ್ಲಿ ಕ್ರಿಮಿನಲ್ ಆರೋಪ ಎದುರಿಸುತ್ತಿರುವ ರಾಜಕಾರಣಿಗಳು ಮತ್ತು ವ್ಯಕ್ತಿಗಳಿಗೆ ಸರ್ಕಾರ ನೀಡಿರುವ ಭದ್ರತಾ ಸೌಲಭ್ಯವನ್ನು ತಕ್ಷಣವೇ ಹಿಂಪಡೆಯುವಂತೆ ಭಾರತೀಯ ಚುನಾವಣಾ ಆಯೋಗ ಆದೇಶಿಸಿದೆ. ಪ್ರಸ್ತುತ ಭದ್ರತೆ ಪಡೆಯುತ್ತಿರುವವರ ಪಟ್ಟಿಯನ್ನು ಪರಿಶೀಲಿಸಿ ಅವರ ಮೇಲಿರುವ ಬೆದರಿಕೆಯ ಸ್ವರೂಪ ಹಾಗೂ ಅರ್ಹತೆಯನ್ನು ಮರು ಮೌಲ್ಯಮಾಪನ ಮಾಡುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳಿಗೆ ಸೂಚಿಸಲಾಗಿದೆ.

<><><>

ಪಶ್ಚಿಮಬಂಗಾಳದಲ್ಲಿ ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ವಿಧಾನಸಭಾ ಚುನಾವಣೆ ನಡೆಸುವಂತೆ ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಡಾ. ಸುಖ್‌ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು, ರಾಜ್ಯದ ಉನ್ನತ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಪಶ್ಚಿಮ ಬಂಗಾಳದ ಮುಖ್ಯ

ಕಾರ್ಯದರ್ಶಿ, ಪೊಲೀಸ್ ಮಹಾ ನಿರ್ದೇಶಕರು, ಕೋಲ್ಕತ್ತಾ ಪೊಲೀಸ್ ಆಯುಕ್ತರು ಸೇರಿದಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಈ ನಿರ್ದೇಶನ ನೀಡಲಾಗಿದೆ.

<><><><>

ಜನವಿಶ್ವಾಸ್ ತಿದ್ದುಪಡಿ ಮಸೂದೆ-೨೦೨೬ ದೇಶದ ವ್ಯಾಪಾರ ವಹಿವಾಟು ಮತ್ತು ನ್ಯಾಯಾಂಗ ವ್ಯವಸ್ಥೆಯಲ್ಲಿ ದೊಡ್ಡ ಬದಲಾವಣೆ ತರಲಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಸಣ್ಣಪುಟ್ಟ ತಾಂತ್ರಿಕ ಅಪರಾಧಗಳಿಗೆ ಇನ್ನು ಮುಂದೆ ಜೈಲುಶಿಕ್ಷೆಯ ಬದಲು ಕೇವಲ ದಂಡ ವಿಧಿಸುವ ನಿಬಂಧನೆಗಳನ್ನು ಈ ವಿಧೇಯಕ ಒಳಗೊಂಡಿದೆ ಎಂದು ವಿವರಿಸಿದ್ದಾರೆ. ಈ ಕ್ರಮದಿಂದಾಗಿ ನ್ಯಾಯಾಂಗ ಪ್ರಕ್ರಿಯೆ ಹೆಚ್ಚು ವೇಗ ಪಡೆದು, ತರ್ಕಬದ್ಧವಾಗಿ ನಡೆಯಲಿದ್ದು, ನ್ಯಾಯಾಲಯಗಳ ಮೇಲಿನ ಹೊರೆ ಗಣನೀಯವಾಗಿ ಕಡಿಮೆಯಾಗಲಿದೆ. ಇದರ ಜೊತೆಗೆ ವ್ಯಾಪಾರಸ್ಥರಲ್ಲಿ ಆತ್ಮವಿಶ್ವಾಸ ಬೆಳೆಯಲು ಮತ್ತು ಸುಲಭವಾಗಿ ವ್ಯವಹಾರ ನಡೆಸಲು ಈ ಸುಧಾರಣೆಗಳು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

<><><><>

ಪಶ್ಚಿಮ ಬಂಗಾಳದಲ್ಲಿ ಮತದಾರರ ಅನುಕೂಲಕ್ಕಾಗಿ ೪ ಸಾವಿರದ ೬೬೦ ಹೆಚ್ಚುವರಿ ಮತಗಟ್ಟೆಗಳನ್ನು ಸ್ಥಾಪಿಸಲು ಭಾರತೀಯ ಚುನಾವಣಾ ಆಯೋಗ ಹಸಿರುನಿಶಾನೆ ತೋರಿದೆ. ಒಂದು ಮತದಾನ ಕೇಂದ್ರದಲ್ಲಿ ಮತದಾರರ ಸಂಖ್ಯೆ ಒಂದು ಸಾವಿರದ ೨೦೦ಕ್ಕಿಂತ ಹೆಚ್ಚಿರುವ ಕಡೆಗಳಲ್ಲಿ ಈ ಹೆಚ್ಚುವರಿ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಗಿದೆ. ಇದರೊಂದಿಗೆ ಮತದಾರರ ಹಿತದೃಷ್ಟಿಯಿಂದ ೩೨೯ ಮತಗಟ್ಟೆಗಳನ್ನು ಬೇರೆಡೆಗೆ ಸ್ಥಳಾಂತರಿಸಲು ಸಹ ಆಯೋಗ ಅನುಮೋದನೆ ನೀಡಿದೆ. ಈ ನಡುವೆ, ಪಶ್ಚಿಮಬಂಗಾಳದಲ್ಲಿ ಕ್ರಿಮಿನಲ್ ಆರೋಪ ಎದುರಿಸುತ್ತಿರುವ ರಾಜಕಾರಣಿಗಳು ಮತ್ತು ವ್ಯಕ್ತಿಗಳಿಗೆ ಸರ್ಕಾರ ನೀಡಿರುವ ಭದ್ರತಾ ಸೌಲಭ್ಯವನ್ನು ತಕ್ಷಣವೇ ಹಿಂಪಡೆಯುವಂತೆ ಭಾರತೀಯ ಚುನಾವಣಾ ಆಯೋಗ ಆದೇಶಿಸಿದೆ. ಪ್ರಸ್ತುತ ಭದ್ರತೆ ಪಡೆಯುತ್ತಿರುವವರ ಪಟ್ಟಿಯನ್ನು ಪರಿಶೀಲಿಸಿ ಅವರ ಮೇಲಿರುವ ಬೆದರಿಕೆಯ ಸ್ವರೂಪ ಹಾಗೂ ಅರ್ಹತೆಯನ್ನು ಮರು ಮೌಲ್ಯಮಾಪನ ಮಾಡುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳಿಗೆ ಸೂಚಿಸಲಾಗಿದೆ.

<><><><>

ಕರ್ನಾಟಕ ಭೇಟಿಯಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಬೆಂಗಳೂರಿನಲ್ಲಿ ನಡೆಯಲಿರುವ ಹಿಂದೂ ಧರ್ಮ ಆಚಾರ್ಯ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಿನ್ನೆ ಬೆಂಗಳೂರಿಗೆ ಆಗಮಿಸಿದ ಅವರನ್ನು ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಪ್ರಮುಖ ನಾಯಕರು ಬರಮಾಡಿಕೊಂಡರು.

<><><>

ಮಹಾರಾಷ್ಟ್ರದ ನಾಸಿಕ್‌ನಲ್ಲಿ ಕಳೆದ ರಾತ್ರಿ ಸಂಭವಿಸಿದ ಕಾರು ಅಪಘಾತದಲ್ಲಿ ಒಂದೇ ಕುಟುಂಬದ ೯ ಮಂದಿ ಮೃತಪಟ್ಟಿದ್ದಾರೆ.  ಚಲಿಸುತ್ತಿದ್ದ ಕಾರು ನಿಯಂತ್ರಣ ತಪ್ಪಿ, ರಸ್ತೆ ಬದಿಯಲ್ಲಿ ನೀರು ತುಂಬಿದ್ದ ಬಾವಿಗೆ ಬಿದ್ದ ಪರಿಣಾಮ ಈ ದುರಂತ ಸಂಭವಿಸಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ ಮೃತರು ದಿಂಡೋರಿ ತಾಲೂಕಿನವರಾಗಿದ್ದು, ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು, ವಾಪಸ್ ಬರುತ್ತಿದ್ದ ವೇಳೆ ಈ ಅವಘಡ ಸಂಭವಿಸಿದೆ. ಘಟನಾ ಸ್ಥಳಕ್ಕೆ ಧಾವಿಸಿದ ಎನ್‌ಡಿಆರ್‌ಎಫ್ ತಂಡಗಳು, ತಡರಾತ್ರಿಯವರೆಗೂ ರಕ್ಷಣಾ ಕಾರ್ಯಾಚರಣೆ ನಡೆಸಿ, ಬಾವಿಯಿಂದ ಕಾರನ್ನು ಹೊರತೆಗೆದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಈ ಸಂಬಂಧ ಪ್ರಕರಣ ದಾಖಲಾಗಿ, ತನಿಖೆ ಮುಂದುವರಿದಿದೆ.

<><><>

ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ಜನತೆಗೆ ಭರವಸೆ ನೀಡಿದೆ. ಇಂಧನಕ್ಕಾಗಿ ಆತಂಕದ ಖರೀದಿ ಮಾಡದಿರಲು ಹಾಗೂ ಅನಗತ್ಯ ಎಲ್‌ಪಿಜಿ ಬುಕ್ಕಿಂಗ್ ಮಾಡದಿರಲು ನಾಗರಿಕರಿಗೆ ಸಲಹೆ ನೀಡಲಾಗಿದೆ. ಇಂಡಿಯನ್ ಆಯಿಲ್ ಸಂಸ್ಥೆ ದಿನಕ್ಕೆ ೨೮ ಲಕ್ಷ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸುತ್ತಿದ್ದು, ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗಿಲ್ಲ ಎಂದು ತಿಳಿಸಿದೆ.

<><><>

ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ನಡೆಸುತ್ತಿರುವ ದಾಳಿಗಳಿಂದ ಹಡಗು ಸಾಗಾಣೆಯನ್ನು ರಕ್ಷಿಸಲು ರಕ್ಷಣಾತ್ಮಕ ಬಲವನ್ನು ಬಳಸುವ ಕುರಿತಾದ ನಿರ್ಣಯದ ಮೇಲಿನ ಮತದಾನವನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಮುಂದೂಡಿದೆ. ಬಹ್ರೇನ್ ದೇಶ ಮಂಡಿಸಿದ್ದ ಈ ಕರಡು

ನಿರ್ಣಯದ ಮೇಲೆ ೧೫ ಸದಸ್ಯ ರಾಷ್ಟ್ರಗಳ ಭದ್ರತಾ ಮಂಡಳಿ ನಿನ್ನೆ ರಾತ್ರಿ ಮತದಾನ ಮಾಡಬೇಕಿತ್ತು. ಆದರೆ, ಶುಭ ಶುಕ್ರವಾರ ಪ್ರಯುಕ್ತ ವಿಶ್ವಸಂಸ್ಥೆ ಸಾರ್ವಜನಿಕ ರಜೆ ಘೋಷಿಸಿದ್ದರಿಂದ ಈ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದೆ.

<><><><>

ಇಂದು ವಾರಾಂತ್ಯವಾಗಿರುವ ಹಿನ್ನೆಲೆಯಲ್ಲಿ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಎರಡು ಪಂದ್ಯಗಳು ನಡೆಯಲಿದ್ದು, ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ. ರಾತ್ರಿ ೭.೩೦ಕ್ಕೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ತಂಡ ರಾಜಸ್ತಾನ್ ರಾಯಲ್ಸ್ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>